# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 880

ಸದಸ್ಯರ ಹೆಸರು : ಶ್ರೀ ಆರ್. ಧರ್ಮಸೇನ

ಉತ್ತರಿಸಬೇಕಾದ ಸಚಿವರು : ಸಾರಿಗೆ ಸಚಿವರು

ಉತ್ತರಿಸಬೇಕಾದ ದಿನಾಂಕ : 18-12-2018

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸಾರಿಗೆ ಸಂಸ್ಥೆಯ ಬಸ್ ನಿಲ್ದಾಣಗಳಲ್ಲಿ ಅನೇಕ ಕಡೆ ಉತ್ತಮ ಉಪಹಾರ ಗೃಹ ಮತ್ತು ಶೌಚಾಲಯಗಳ ವ್ಯವಸ್ಥೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; | ಸಾರಿಗೆ ಸಂಸ್ಥೆಗಳ ವ್ಯಾಪ್ತಿಯ ಜಿಲ್ಲಾ / ತಾಲ್ಲೂಕು ಮತ್ತು ಹೋಬಳಿ ಸ್ಥಳಗಳಲ್ಲಿನ ಎಲ್ಲಾ ಬಸ್ ನಿಲ್ದಾಣಗಳಲ್ಲಿ ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ಉಪಹಾರ ಗೃಹ ಮತ್ತು ಸುಸಜ್ಜಿತವಾದ ಶೌಚಾಲಯ ವ್ಯವಸ್ಥೆ ಕಲ್ಪಿಸಲಾಗಿರುತ್ತದೆ.<br>ಖಾಲಿ ಇರುವ ಉಪಹಾರ ಗೃಹಗಳಿಗೆ ಪರವಾನಿಗೆದಾರರ ಆಯ್ಕೆಗಾಗಿ ಮತ್ತು ಶೌಚಾಲಯಗಳ ಸ್ವಚ್ಛತಾ ಗುತ್ತಿಗೆಗೆ ಗುತ್ತಿಗೆದಾರರನ್ನು ಆಯ್ಕೆ ಮಾಡುವ ಟೆಂಡರ್ ಪ್ರಕ್ರಿಯೆ ಜಾರಿಯಲ್ಲಿರುತ್ತದೆ. |
| ಆ) | ಬಸ್ ನಿಲ್ದಾಣಗಳಲ್ಲಿರುವ ಶೌಚಾಲಯಗಳಲ್ಲಿ ಸಾರ್ವಜನಿಕರಿಂದ ಶುಲ್ಕ ಪಡೆದರೂ ಸ್ವಚ್ಛತೆಯನ್ನು ಕಾಪಾಡುತ್ತಿಲ್ಲದಿರುವುದರಿಂದ ಖಾಸಗಿಯವರಿಗೆ ವಹಿಸಿ ಸ್ವಚ್ಛತೆಯನ್ನು ಕಾಪಾಡುವ ವ್ಯವಸ್ಥೆಯನ್ನು ಮಾಡಲಾಗುವುದೇ; | ಸಾರಿಗೆ ಸಂಸ್ಥೆಗಳ ವ್ಯಾಪ್ತಿಯ ಬಸ್ ನಿಲ್ದಾಣಗಳಲ್ಲಿನ ಶೌಚಾಲಯ ಬಳಕೆಗಾಗಿ ಮತ್ತು ಸಾರ್ವಜನಿಕರಿಂದ ನಿಗದಿತ ಶುಲ್ಕವನ್ನು ಪಡೆದು ಸ್ವಚ್ಛತೆಯನ್ನು ನಿರಂತರವಾಗಿ ನಿರ್ವಹಿಸಲು ಇ-ಟೆಂಡರ್ ಮೂಲಕ ಸ್ವಚ್ಛತಾ ಗುತ್ತಿಗೆದಾರರನ್ನು ಆಯ್ಕೆ ಮಾಡಿಕೊಳ್ಳಲಾಗಿದೆ.<br>ಬಸ್ ನಿಲ್ದಾಣಗಳಲ್ಲಿನ ಶೌಚಾಲಯ ಸ್ವಚ್ಛತೆಯನ್ನು ಇನ್ನು ಉತ್ತಮವಾಗಿ ನಿರ್ವಹಿಸಲು ಅಂತರರಾಷ್ಟ್ರೀಯ ಖ್ಯಾತಿಯ ಸೇವಾ ಸಂಸ್ಥೆಯಾದ ಮೆ.ಸುಲಭ್ ಇಂಟರ್‌ನ್ಯಾಷನಲ್ ರವರಿಗೆ ವಹಿಸುವ ಪ್ರಸ್ತಾವನೆ ಪರಿಶೀಲನೆಯಲ್ಲಿರುತ್ತದೆ. |
| ಇ) | ಬಸ್ ನಿಲ್ದಾಣಗಳ ಉಪಹಾರ ಮಂದಿರಗಳಲ್ಲಿ ಶುಚಿ ರುಚಿಯಾದ ಆಹಾರ ಪದಾರ್ಥಗಳನ್ನು ಸರಬರಾಜು ಮಾಡುವಂತೆ ಹಾಗೂ ಸಾರಿಗೆ ಸಂಸ್ಥೆಯ ಅಧಿಕಾರಿಗಳು ನಿಯಮಿತವಾಗಿ ತಪಾಸಣೆ ಮಾಡಿ ಉತ್ತಮ ಉಪಹಾರ ಮಂದಿರ ಹಾಗೂ ಸ್ವಚ್ಛ ಶೌಚಾಲಯವಿರುವಂಥ ಪರಿಸ್ಥಿತಿ ನಿರ್ಮಾಣ ಮಾಡಲು ಕ್ರಮ ಕೈಗೊಳ್ಳಲಾಗುವುದೇ? | ಬಸ್ ನಿಲ್ದಾಣಗಳಲ್ಲಿನ ಉಪಹಾರ ಗೃಹಗಳಲ್ಲಿ ಉತ್ತಮ ಗುಣಮಟ್ಟದ ಮತ್ತು ಶುಚಿರುಚಿಯಾದ ಆಹಾರ ಪದಾರ್ಥಗಳನ್ನು ತಯಾರಿಸಿ ಸಾರ್ವಜನಿಕರಿಗೆ ನೀಡಲು, ಆಸಕ್ತದಾರರಿಂದ ಇ-ಟೆಂಡರ್ ಮೂಲಕ ಅರ್ಜಿ ಆಹ್ವಾನಿಸಿ, ಪರವಾನಗಿದಾರರನ್ನು ಆಯ್ಕೆ ಮಾಡಲಾಗುತ್ತದೆ.<br>ಉಪಹಾರ ಗೃಹದಲ್ಲಿನ ಸ್ವಚ್ಛತೆ ಮತ್ತು ಗುಣಮಟ್ಟವನ್ನು ಪರೀಕ್ಷಿಸಲು ನಿಯಮಿತವಾಗಿ ನಿಗಮದ ಅಧಿಕಾರಿಗಳು ಭೇಟಿ ನೀಡಿ, ಪರಿಶೀಲನೆ / ತಪಾಸಣೆ ನಡೆಸುತ್ತಾರೆ. ಉಪಹಾರಗೃಹದಲ್ಲಿನ ಸ್ವಚ್ಛತೆ ಮತ್ತು ಆಹಾರದ ಗುಣಮಟ್ಟ ಸಮರ್ಪಕವಾಗಿಲ್ಲದಿದ್ದಲ್ಲಿ ಮತ್ತು ಪ್ರಯಾಣಿಕರ ದೂರುಗಳನ್ನಾಧರಿಸಿ ಉಪಹಾರಗೃಹದ ಪರವಾನಗಿದಾರರಿಗೆ ನೋಟೀಸ್ ನೀಡುವುದು, ದಂಡ ವಿಧಿಸುವುದು ಮತ್ತು ಪರವಾನಗಿ ರದ್ದುಗೊಳಿಸುವ ಕ್ರಮವು ಜಾರಿಯಲ್ಲಿರುತ್ತದೆ.<br>ಬಸ್ ನಿಲ್ದಾಣದ ಶೌಚಾಲಯಗಳ ಸ್ವಚ್ಛತೆಯು ಸಮರ್ಪಕವಾಗಿಲ್ಲದಿರುವ ಬಗ್ಗೆ ಹಾಗೂ ಶೌಚಾಲಯ ಬಳಕೆದಾರರಿಂದ ಹೆಚ್ಚಿನ ಹಣ ಪಡೆಯುತ್ತಿರುವ ಬಗ್ಗೆ ದೂರು / ವರದಿಗಳನ್ನಾಧರಿಸಿ ಸ್ವಚ್ಛತಾ ಗುತ್ತಿಗೆದಾರರಿಗೆ ನೋಟೀಸ್ ನೀಡುವುದಲ್ಲದೆ, ದಂಡವನ್ನು ವಿಧಿಸುವ ಕ್ರಮವು ಜಾರಿಯಲ್ಲಿರುತ್ತದೆ. |

ಸಾರಿಇ 166 ಸಾಸಂಪ್ರ 2018

(ಡಿ.ಸಿ.ತಮ್ಮಣ್ಣ)
ಸಾರಿಗೆ ಸಚಿವರು